# ಕರ್ನಾಟಕ ವಿಧಾನ ಪರಿಷತ್ತು

| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1063 |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14/12/2023 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ನೋಂದಾಯಿತ ಕಾರ್ಮಿಕರ ಮಕ್ಕಳ ಪೈಕಿ ಅರ್ಧಕ್ಕಿಂತ ಹೆಚ್ಚು ಮಂದಿಗೆ ಸ್ಕಾಲರ್ ಶಿಪ್ ಹಣ ದೊರೆಯದೆ ಈ ಕಾರ್ಮಿಕರ ಮಕ್ಕಳು ಸಮಸ್ಯೆಗೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ಮಂಡಳಿಗಳ ಮೂಲಕ ಅರ್ಹ ಕಾರ್ಮಿಕರ ಮಕ್ಕಳಿಗೆ ನೀಡಲಾಗುತ್ತಿರುವ ಶೈಕ್ಷಣಿಕ ಧನ ಸಹಾಯವು ಮಾರ್ಗಸೂಚಿಯ ನಿಯಮಗಳನ್ನು ಪೂರೈಸದ ಮಕ್ಕಳಿಗೆ ದೊರೆಯದೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br><br>ಈ ಮಂಡಳಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಶೈಕ್ಷಣಿಕ ಧನ ಸಹಾಯವನ್ನು 2007 ರಿಂದ ನೀಡಲಾಗುತ್ತಿದೆ.<br><br>ಕಳೆದ 5 ವರ್ಷಗಳಲ್ಲಿ ಶೈಕ್ಷಣಿಕ ಧನ ಸಹಾಯಕ್ಕಾಗಿ ಸ್ವೀಕರಿಸಿದ ಅರ್ಜಿಗಳು ಹಾಗೂ ಮಂಜೂರಾದ ಅರ್ಜಿಗಳ ವಿವರಗಳು ಈ ಕೆಳಕಂಡಂತಿರುತ್ತದೆ. |

| ಕ್ರ. ಸಂ | ವರ್ಷ | ಸ್ವೀಕರಿಸಲಾದ ಅರ್ಜಿಗಳು | ಮಂಜೂರಾದ ಅರ್ಜಿಗಳು |
|---|---|---|---|
| 1 | 2018-19 | - | 95,637 |
| 2 | 2019-20 | 1,37,609 | 1,25,403 |
| 3 | 2020-21 | 1,85,837 | 1,15,538 |
| 4 | 2021-22 | 6,42,155 | 4,42,387 |
| 5 | 2022-23 | 11,13,933 | 701261 |

2021-22 ಸಾಲಿನ 1.70 ಲಕ್ಷ ಅರ್ಜಿಗಳನ್ನು ಹಾಗೂ 2022-23 ನೇ ಸಾಲಿನ 2.60 ಲಕ್ಷ ಅರ್ಜಿಗಳ ವಿಲೇವಾರಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.

| | | |
|---|---|---|
| | | ಮಂಡಳಿಯಿಂದ ಅರ್ಹ ನೋಂದಾಯಿತ ಫಲಾನುಭವಿಗಳಿಗೆ ಶೈಕ್ಷಣಿಕ ಧನ ಸಹಾಯವನ್ನು ಮಂಜೂರು ಮಾಡಲು ಎಲ್ಲಾ ಕ್ರಮ ವಹಿಸಲಾಗುತ್ತಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ನೋಂದಾಯಿತ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್‌ಶಿಪ್ ನೀಡುವ ಯಾವುದೇ ಯೋಜನೆಯನ್ನು ಜಾರಿಗೊಳಿಸುತ್ತಿರುವುದಿಲ್ಲ. ಆದರೆ, ಮಂಡಳಿಯು ಜಾರಿಗೊಳಿಸುತ್ತಿರುವ "ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ" ಯಡಿ, ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br><br>**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br><br>ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಕಾಯ್ದೆಯನ್ವಯ ವಂತಿಕೆ ಪಾವತಿ ಮಾಡುವ ಸಂಘಟಿತ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಧನ ಸಹಾಯವನ್ನು ಸಕಾಲದಲ್ಲಿ ನೀಡಲಾಗುತ್ತಿದ್ದು, ಯಾವುದೇ ಸಮಸ್ಯೆ ಇರುವುದಿಲ್ಲ. |
| ಆ) | ಬಂದಿದ್ದಲ್ಲಿ, ಸದರಿ ನೋಂದಾಯಿತ ಕಾರ್ಮಿಕರ ಮಕ್ಕಳಿಗೆ ಇದುವರೆಗೂ ಸ್ಕಾಲರ್ ಷಿಪ್ ಹಣ ದೊರೆಯದೆ ಇರಲು ಕಾರಣಗಳೇನು; | ನೋಂದಾಯಿತ ಕಾರ್ಮಿಕರ ಮಕ್ಕಳಿಗೆ ಸಕಾಲದಲ್ಲಿ ಸ್ಕಾಲರ್ ಷಿಪ್ ಹಣ ದೊರೆಯದೆ ಇರಲು ಕಾರಣಗಳು ಈ ಕೆಳಕಂಡಂತಿವೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) (ಕರ್ನಾಟಕ) (ನಿಯಮಗಳು 2006) ರ ನಿಯಮ 45 ರಲ್ಲಿ ನಿಗದಿಪಡಿಸಿರುವ ಅರ್ಹತಾ ಮಾನದಂಡಗಳನ್ನು ಪೂರೈಸದ ಶೈಕ್ಷಣಿಕ ಸಹಾಯಧನದ ಅರ್ಜಿಗಳನ್ನು ತಿರಸ್ಕರಿಸಲಾಗುತ್ತಿರುವುದರಿಂದ ಶೈಕ್ಷಣಿಕ ಸಹಾಯಧನ ದೊರೆಯದಿರಲು ಕಾರಣವಾಗಿರುತ್ತದೆ. |

| | | |
|---|---|---|
| | | **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯಲ್ಲಿ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"ಯಡಿ, ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಪೋಷಕರು/ ಮಕ್ಕಳಿಂದ ಸ್ವೀಕರಿಸಲಾದ ಎಲ್ಲಾ ಅರ್ಜಿಗಳನ್ನು ಮಾರ್ಗಸೂಚಿಗಳನ್ವಯ ಪರಿಶೀಲಿಸಿ ಅರ್ಹ ಅರ್ಜಿದಾರರಿಗೆ ಶೈಕ್ಷಣಿಕ ಸಹಾಯಧನ ಪಾವತಿಸಲಾಗಿದೆ.<br>**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯಲ್ಲಿ ಸಂಘಟಿತ ಕಾರ್ಮಿಕರ ಅರ್ಹ ಎಲ್ಲಾ ಮಕ್ಕಳಿಗೂ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ನೀಡಲಾಗುತ್ತಿದ್ದು, ಕೆಲವು ಅರ್ಜಿಗಳು ಪರಿಶೀಲನೆ ಹಂತದಲ್ಲಿರುತ್ತದೆ. |
| ಇ) | ಎಷ್ಟು ಜನ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್ ಷಿಪ್ ಹಣ ನೀಡಲು ಬಾಕಿ ಉಳಿದಿದೆ; | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಡಳಿಗಳಲ್ಲಿ ನೋಂದಾಯಿತ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್ ಷಿಪ್ ಮತ್ತು ಶೈಕ್ಷಣಿಕ ಧನ ಸಹಾಯಧನದ ಬಾಕಿ ಉಳಿಕೆಯ ವಿವರ ಈ ಕೆಳಕಂಡಂತಿದೆ.<br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>2021-22ನೇ ಸಾಲಿನಲ್ಲಿ 1.74 ಲಕ್ಷ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್ ಷಿಪ್ ಹಣ ನೀಡಲು ಬಾಕಿ ಉಳಿದಿದ್ದು, 2022-23ನೇ ಸಾಲಿನಲ್ಲಿ 2.60 ಲಕ್ಷ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್ ಷಿಪ್ ಹಣ ನೀಡಲು ಬಾಕಿ ಉಳಿದಿರುತ್ತದೆ. ಈ ಎಲ್ಲಾ ಅರ್ಜಿಗಳನ್ನು ಅಗತ್ಯ ಪರಿಶೀಲಿನೆಯ ನಂತರ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಮಂಡಳಿಯಲ್ಲಿ ಸ್ವೀಕರಿಸಲಾದ ಎಲ್ಲಾ ಅರ್ಹ ಅರ್ಜಿಗಳನ್ನು ಪರಿಶೀಲಿಸಿ ತ್ವರಿತವಾಗಿ ಶೈಕ್ಷಣಿಕ ಸಹಾಯಧನ ಪಾವತಿಸಲಾಗುತ್ತಿದ್ದು, ಯಾವುದೇ ಅರ್ಜಿಗಳು ಬಾಕಿ ಉಳಿದಿರುವುದಿಲ್ಲ. |

| | | |
|---|---|---|
| | | **<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br>ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಯೋಜನೆಯಡಿ 8200 ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯದ ಅರ್ಜಿಗಳು ಬಾಕಿ ಉಳಿದಿದ್ದು, ಸದರಿ ಅರ್ಜಿಗಳನ್ನು ತ್ವರಿತಗತಿಯಲ್ಲಿ ವಿಲೇವಾರಿ ಮಾಡಲಾಗುತ್ತಿದೆ. |
| ಈ) | ಯಾವ ಕಾಲಮಿತಿಯೊಳಗೆ ಬಾಕಿ ಇರುವ ಎಲ್ಲಾ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್ ಷಿಪ್ ಹಣ ನೀಡಲಾಗುವುದು? | ಬಾಕಿ ಇರುವ ಎಲ್ಲಾ ಕಾರ್ಮಿಕರ ಮಕ್ಕಳಿಗೆ ಸ್ಕಾಲರ್ ಷಿಪ್ ಹಣ ಪಾವತಿಸಲು ಸಂಬಂಧಿಸಿದ ಕಾಲಮಿತಿಯ ವಿವರ ಈ ಕೆಳಕಂಡಂತಿದೆ.<br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಪರಿಶೀಲನಾ ಪ್ರಕ್ರಿಯೆ ಮುಗಿದ ನಂತರ ಅರ್ಹ ಅರ್ಜಿಗಳಿಗೆ ಸ್ಕಾಲರ್ ಷಿಪ್ ಮೊತ್ತವನ್ನು ಪಾವತಿಸಲಾಗುತ್ತದೆ.<br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯಲ್ಲಿ ಸ್ವೀಕರಿಸಲಾದ ಎಲ್ಲಾ ಅರ್ಹ ಅರ್ಜಿಗಳನ್ನು ಪರಿಶೀಲಿಸಿ ತ್ವರಿತವಾಗಿ ಶೈಕ್ಷಣಿಕ ಸಹಾಯಧನ ಪಾವತಿಸಲಾಗುತ್ತಿದ್ದು, ಯಾವುದೇ ಅರ್ಜಿಗಳು ಬಾಕಿ ಉಳಿದಿರುವುದಿಲ್ಲ.<br>**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br>ಬಾಕಿ ಇರುವ ಅರ್ಜಿಗಳನ್ನು ಜನವರಿ 2024 ರ ಅಂತ್ಯದೊಳಗೆ ವಿಲೇವಾರಿ ಮಾಡಲಾಗುವುದು. |

**ಕಾಇ 555 ಎಲ್‌ಇಟಿ 2023**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**